All India Radio: Bangalore
National Bulletin In Kannada
07.10.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ೨೦೨೯ರ ವೇಳೆಗೆ ૩ ಲಕ್ಷ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಉತ್ಪಾದನೆ ಗುರಿ - ರಕ್ಷಣಾ ಸಚಿವ ರಾಜನಾಥ್ ಸಿಂಗ್
- ೨೪ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ೪ ರೈಲ್ವೆ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಸಮಿತಿ ಅನುಮೊದನೆ
- ಎನ್‌ಡಿಆರ್‌ಎಫ್ ನಿಧಿಯಿಂದ ಹರಿಯಾಣ, ಮಧ್ಯಪ್ರದೇಶ, ರಾಜಸ್ಥಾನಕ್ಕೆ ೬೦૩ ಕೋಟಿ ಅನುದಾನಕ್ಕೆ ಕೇಂದ್ರ ಸರ್ಕಾರ ಅನುಮೋದನೆ
- ಜೂಡೊ ಕಿರಿಯರ ವಿಶ್ವಕಪ್; ಭಾರತಕ್ಕೆ ಮೊದಲ ಪದಕ ಗೆಲ್ಲಿಸಿಕೊಟ್ಟ ಭಾರತದ ಲಿಂಥೊಯ್ ಚನಂಬಮ್

<><><><>

೨೦೨೯ರ ವೇಳೆಗೆ ಮೂರು ಲಕ್ಷ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಉತ್ಪಾದನೆ ಮತ್ತು ೫೦ ಸಾವಿರ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ರಫ್ತು ಸಾಧಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ರಕ್ಷಣಾ ಉತ್ಪಾದನೆಯಲ್ಲಿ ಅವಕಾಶಗಳ ಕುರಿತ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದ ರಕ್ಷಣಾ ಉತ್ಪಾದನೆ ಒಂದು ಲಕ್ಷ ೫೦ ಸಾವಿರ ಕೋಟಿ ರೂಪಾಯಿಗಳಿಗಿಂತ ಅಧಿಕ ದಾಖಲೆಯ ಮಟ್ಟಕ್ಕೆ ಏರಿದೆ. ೨೦೧೪ರಲ್ಲಿ ಇದು ಕೇವಲ ೪೬ ಸಾವಿರ ಕೋಟಿ ರೂಪಾಯಿಗಳಷ್ಟಿತ್ತು. ರಕ್ಷಣಾ ರಫ್ತು ಕೂಡ ೨೪ ಸಾವಿರ ಕೋಟಿ ರೂಪಾಯಿಗಳನ್ನು ದಾಟಿದೆ ಎಂದು ತಿಳಿಸಿದರು. ರಕ್ಷಣಾ ವಲಯದಲ್ಲಿ ದೇಶದ ಸ್ವಾವಲಂಬನೆ, ನೀತಿ ಘೋಷಣೆಗಳನ್ನು ಮೀರಿ ಪರಿಣಾಮ ಮತ್ತು ಅನುಷ್ಠಾನದ ಹಂತವನ್ನು ತಲುಪಿವೆ. ಕಳೆದ ೧೦ ವರ್ಷಗಳಲ್ಲಿ ದೇಶದಲ್ಲಿ ರಕ್ಷಣಾ ಉತ್ಪನ್ನಗಳ ಸ್ಥಳೀಯ ವಿನ್ಯಾಸ, ಅಭಿವೃದ್ಧಿ ಮತ್ತು ಉತ್ಪಾದನೆಯನ್ನು ಉತ್ತೇಜಿಸಲು

ಸರ್ಕಾರ ಆತ್ಮ ನಿರ್ಭರ್ ಭಾರತದಡಿ ಹಲವಾರು ಉಪಕ್ರಮಗಳನ್ನು ಕೈಗೊಂಡಿವೆ ಎಂದು ಅವರು ಹೇಳಿದರು.

**ಧ್ವನಿ : ರಾಜನಾಥ್ ಸಿಂಗ್ (೩೦ ಸೆಕೆಂಡ್‌ಗಳು)**

<><><><>

೨೪ ಸಾವಿರದ ೬೩೪ ಕೋಟಿ ರೂಪಾಯಿಗಳ ೪ ರೈಲ್ವೆ ಯೋಜನೆಗಳಿಗೆ ಆರ್ಥಿಕ ವ್ಯವಹಾರ ಕುರಿತ ಕೇಂದ್ರ ಸಚಿವ ಸಂಪುಟ ಸಮಿತಿ ಇಂದು ಅನುಮೋದನೆ ನೀಡಿದೆ. ಈ ನಾಲ್ಕು ಮಲ್ಟಿಟ್ರ್ಯಾಕ್ ಯೋಜನೆಗಳು ಮಹಾರಾಷ್ಟ್ರ, ಮಧ್ಯಪ್ರದೇಶ, ಗುಜರಾತ್ ಮತ್ತು ಛತ್ತೀಸ್‌ಗಢದ ೧೮ ಜಿಲ್ಲೆಗಳನ್ನು ವ್ಯಾಪಿಸಲಿದ್ದು, ಪ್ರಸ್ತುತ ಇರುವ ಭಾರತೀಯ ರೈಲ್ವೆಯ ಜಾಲವನ್ನು ಸುಮಾರು ೮೯೪ ಕಿಲೋಮೀಟರ್‌ಗಳಷ್ಟು ವಿಸ್ತರಿಸಲಿದೆ. ನವದೆಹಲಿಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಮಿತಿ ಸಭೆಯ ನಂತರ, ಸಭೆಯಲ್ಲಿ ಕೈಗೊಂಡ ನಿರ್ಧಾರಗಳ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯ ಒಟ್ಟು ಉದ್ದ ಒಂದು ಸಾವಿರದ ೬೧೯ ಕಿಲೋಮೀಟರ್‌ಗಳಷ್ಟಿದೆ. ಇದು ೮೫ ಲಕ್ಷಕ್ಕೂ ಹೆಚ್ಚು ಜನರನ್ನು ಮತ್ತು ಎರಡು ಮಹತ್ವಾಕಾಂಕ್ಷಿ ಜಿಲ್ಲೆಗಳನ್ನು ಹೊಂದಿರುವ ಸುಮಾರು ೩ ಸಾವಿರದ ೬೩೩ ಹಳ್ಳಿಗಳಿಗೆ ಸಂಪರ್ಕ ಹೆಚ್ಚಿಸಲಿದೆ ಎಂದು ಹೇಳಿದರು.

**ಧ್ವನಿ : ಅಶ್ವಿನಿ ವೈಷ್ಣವ್ (೨೨ ಸೆಕೆಂಡ್‌ಗಳು)**

<><><><>

ಅಗ್ನಿಶಾಮಕ ಸೇವೆಗಳ ವಿಸ್ತರಣೆ ಮತ್ತು ಆಧುನೀಕರಣಕ್ಕಾಗಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಡಿಯಲ್ಲಿ ಹರಿಯಾಣ, ಮಧ್ಯಪ್ರದೇಶ ಮತ್ತು ರಾಜಸ್ಥಾನಗಳಿಗೆ ಕೇಂದ್ರ ಸರ್ಕಾರವು ೯೦೩ ಕೋಟಿ ರೂಪಾಯಿಗಳಿಗೂ ಹೆಚ್ಚು ಅನುದಾನವನ್ನು ಅನುಮೋದಿಸಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿಯು ಈ ನೆರವನ್ನು ಅನುಮೋದಿಸಿದೆ. ಒಟ್ಟು ಮೊತ್ತದಲ್ಲಿ ಹರಿಯಾಣಕ್ಕೆ ೧೧೭ ಕೋಟಿ ರೂಪಾಯಿಗಳಿಗೂ ಹೆಚ್ಚು, ಮಧ್ಯಪ್ರದೇಶಕ್ಕೆ ೩೯೭ ಕೋಟಿ ರೂಪಾಯಿಗಳು ಮತ್ತು ರಾಜಸ್ಥಾನಕ್ಕೆ ೩೮೮ ಕೋಟಿ ರೂಪಾಯಿಗಳಿಗೂ ಹೆಚ್ಚು ಅನುದಾನವನ್ನು ಅನುಮೋದಿಸಲಾಗಿದೆ. ೨೦೨೪ ರಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ ಹಾನಿಗೊಳಗಾದ ಅಸ್ಸಾಂ ಮತ್ತು ಗುಜರಾತ್‌ಗೆ ಎನ್‌ಡಿಆರ್‌ಎಫ್‌ನಿಂದ ೭೦೭ ಕೋಟಿ ರೂಪಾಯಿಗಳಿಗೂ ಹೆಚ್ಚು ಕೇಂದ್ರೀಯ ನೆರವನ್ನು ಸಮಿತಿಯು ಅನುಮೋದಿಸಿದೆ.

ನೈಸರ್ಗಿಕ ವಿಕೋಪಗಳು ಮತ್ತು ವಿಪತ್ತುಗಳ ಸಮಯದಲ್ಲಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಗಳಿಗೆ ಸಹಕಾರ ನೀಡುತ್ತಿದೆ ಮತ್ತು ಅಗತ್ಯವಿರುವ ಎಲ್ಲಾ ಬೆಂಬಲವನ್ನು ನೀಡುತ್ತಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ, ರಾಜ್ಯ ವಿಪತ್ತು ನಿರ್ವಹಣೆ ನಿಧಿಯಡಿಯಲ್ಲಿ ೨೭ ರಾಜ್ಯಗಳಿಗೆ ೧೩ ಸಾವಿರ ೬೦೩ ಕೋಟಿ ರೂಪಾಯಿಗಳನ್ನು ಮತ್ತು ಎನ್‌ಡಿಆರ್‌ಎಫ್ ಅಡಿಯಲ್ಲಿ ಎರಡು ಸಾವಿರ ಕೋಟಿ ರೂಪಾಯಿಗಳನ್ನು ೧೨ ರಾಜ್ಯಗಳಿಗೆ ಬಿಡುಗಡೆ ಮಾಡಲಾಗಿದೆ.

<><><><>

ಕಳೆದ ೧೧ ವರ್ಷಗಳಲ್ಲಿ ದೇಶವು ಗಮನಾರ್ಹ ಪರಿವರ್ತನೆಗೆ ಸಾಕ್ಷಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೇಶಾದ್ಯಂತ ಮಹಿಳೆಯರು, ಯುವಕರು ಮತ್ತು ರೈತರನ್ನು ಸಬಲೀಕರಣಗೊಳಿಸಿ, ೨೫ ಕೋಟಿಗೂ ಹೆಚ್ಚು ಜನರನ್ನು ಬಡತನದಿಂದ ಹೊರತರುವಲ್ಲಿ ಸರ್ಕಾರದ ಮಹತ್ವದ ಉಪಕ್ರಮಗಳು ಸಹಕಾರಿಯಾಗಿವೆ ಎಂದು ಅವರು ಹೇಳಿದರು. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಜಾಗತಿಕ ಆರ್ಥಿಕತೆಯಲ್ಲಿ ಭಾರತವು ಬಲಿಷ್ಠವಾಗಿ ನಿಂತಿದೆ ಎಂದು ಹೇಳಿದ್ದಾರೆ. ದೇಶವು ಆರೋಗ್ಯ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗೆ ನೆಲೆಯಾಗಿದೆ, ಸರ್ಕಾರವು ವ್ಯಾಪಕ ಸುಧಾರಣೆಗಳನ್ನು ತೆಗೆದುಕೊಂಡಿದೆ ಎಂದು ಹೇಳಿದ್ದಾರೆ.

<><><><>

ಆಪರೇಷನ್ ಸಿಂಧೂರ್ ಸಮಯದಲ್ಲಿ ದೇಶದ ಸಶಸ್ತ್ರ ಪಡೆಗಳು ಜಂಟಿ ಮತ್ತು ಕಾರ್ಯತಂತ್ರದ ದೂರದೃಷ್ಟಿಯ ಬಲವನ್ನು ಪ್ರದರ್ಶಿಸಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿಂದು ೬೫ನೇ ರಾಷ್ಟ್ರೀಯ ರಕ್ಷಣಾ ಕಾಲೇಜು ಅಧ್ಯಾಪಕರು ಮತ್ತು ಸದಸ್ಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂಟಿಗ್ರೇಟೆಡ್ ಥಿಯೇಟರ್ ಕಮಾಂಡ್‌ಗಳು ಮತ್ತು ಇಂಟಿಗ್ರೇಟೆಡ್ ಬ್ಯಾಟಲ್ ಗ್ರೂಪ್‌ಗಳ ಸ್ಥಾಪನೆಯೊಂದಿಗೆ ಪಡೆಗಳನ್ನು ಪುನರ್ರಚಿಸಲು ಪ್ರಯತ್ನಗಳು ನಡೆಯುತ್ತಿವೆ. ಭಾರತವು ಸಶಸ್ತ್ರ ಪಡೆಗಳನ್ನು ತಾಂತ್ರಿಕವಾಗಿ ಮುಂದುವರಿದ, ಸಂಯೋಜಿತ ಕಾರ್ಯಾಚರಣೆಗಳಿಗೆ ಸಮರ್ಥವಾಗಿರುವ ಯುದ್ಧ-ಸನ್ನದ್ಧ ಪಡೆಯಾಗಿ ಪರಿವರ್ತಿಸುವಲ್ಲಿ ತೊಡಗಿಸಿಕೊಂಡಿದೆ ಎಂದು ಹೇಳಿದರು.

<><><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸಂಸತ್ ಭವನದಲ್ಲಿ ರಾಜ್ಯಸಭೆಯ ವಿವಿಧ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಸಭೆ ನಡೆಸಿದ್ದಾರೆ. ಇದು ರಾಧಾಕೃಷ್ಣನ್ ಅವರು, ರಾಜ್ಯಸಭೆಯ ಸಭಾಪತಿಗಳಾಗಿ ಅಧಿಕಾರ ವಹಿಸಿಕೊಂಡ ನಂತರ ರಾಜಕೀಯ ಪಕ್ಷಗಳ ನಾಯಕರೊಂದಿಗೆ ನಡೆಸುತ್ತಿರುವ ಮೊದಲ ಸಭೆಯಾಗಿದೆ. ಸದನದ ಚರ್ಚೆಗಳನ್ನು ಸುಗಮವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಸಲು ಅಗತ್ಯ ಕ್ರಮಗಳ ಬಗ್ಗೆ ಚರ್ಚಿಸುವುದು ಹಾಗೂ ಅತ್ಯಂತ ಕಡಿಮೆ ಅಡೆತಡೆಗಳೊಂದಿಗೆ ಉನ್ನತಮಟ್ಟದ ಚರ್ಚೆಗಳು ನಡೆಯುವಂತೆ ಮಾಡುವ ಕುರಿತು ಸದಸ್ಯರ ಸಲಹೆಗಳನ್ನು ಪಡೆಯುವುದು ಈ ಸಭೆಯ ಉದ್ದೇಶವಾಗಿದೆ.

<><><>

ನೇರ ನಗದು ವರ್ಗಾವಣೆಯ ಬಳಕೆಯಿಂದ ಸರ್ಕಾರ ನಾಲ್ಕು ಲಕ್ಷದ ೩೧ ಸಾವಿರ ಕೋಟಿ ರೂಪಾಯಿಗಳನ್ನು ಉಳಿತಾಯ ಮಾಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.  ಮುಂಬೈನಲ್ಲಿ ನಡೆದ ಜಾಗತಿಕ ಫಿನ್‌ಟೆಕ್ ಉತ್ಸವದಲ್ಲಿ ಭಾಗವಹಿಸಿದ್ದ ಸಚಿವರು ಗಿಫ್ಟ್ ಸಿಟಿಯಲ್ಲಿ ವಿದೇಶಿ ಹಣಕಾಸು ಇತ್ಯರ್ಥ ವ್ಯವಸ್ಥೆಗೆ ಚಾಲನೆ ನೀಡಿದರು. ಈ ವ್ಯವಸ್ಥೆಯು ಗಿಫ್ಟ್ ಸಿಟಿಯ ಒಳಗೆ ವಿದೇಶಿ ಕರೆನ್ಸಿ ವಹಿವಾಟುಗಳನ್ನು ನೈಜ ಸಮಯದಲ್ಲಿ ಪೂರ್ಣಗೊಳಿಸುತ್ತದೆ. ಪ್ರಸ್ತುತ, ಗಿಫ್ಟ್ ಸಿಟಿಯಲ್ಲಿ ವಿದೇಶಿ ಕರೆನ್ಸಿ ವಹಿವಾಟು ಇತ್ಯರ್ಥಗೊಳಿಸಲು ೩೬ ರಿಂದ ೫೪ ಗಂಟೆಗಳು ಬೇಕಾಗುತ್ತದೆ. ಇದರೊಂದಿಗೆ ಭಾರತ ಇಂತಹ ವ್ಯವಸ್ಥೆಗಳನ್ನು ಹೊಂದಿರುವ ಹಾಂಗ್ ಕಾಂಗ್, ಟೋಕಿಯೊ, ಮನಿಲಾಗಳ ಸಾಲಿಗೆ ಸೇರಿದೆ ಎಂದು ಸಚಿವರು ತಿಳಿಸಿದರು.

<><><>

ಪೆರುವಿನ ಲಿಮಾದಲ್ಲಿ ನಡೆದ ಜುಡೊ ಕಿರಿಯರ ವಿಶ್ವಕಪ್‌ನಲ್ಲಿ ಭಾರತಕ್ಕೆ ಮೊದಲ ಪದಕ ಗೆಲ್ಲಿಸಿ ಕೊಡುವ ಮೂಲಕ ಭಾರತದ ಜುಡೊ ಆಟಗಾರ್ತಿ ಲಿಂಥೊಯ್ ಚನಂಬಮ್  ಇತಿಹಾಸ ಸೃಷ್ಟಿಸಿದ್ದಾರೆ. ಮಹಿಳೆಯರ ೬೩ ಕೆ.ಜಿ. ವಿಭಾಗದಲ್ಲಿ ನೆದರ್‌ಲ್ಯಾಂಡ್ಸ್ ದೇಶದ ಜೊನಿ ಗಿಲೆನ್ ಅವರನ್ನು ಪರಾಭವಗೊಳಿಸುವುದರೊಂದಿಗೆ ಕಂಚಿನ ಪದಕ ತಮ್ಮದಾಗಿಸಿಕೊಂಡರು.

<><><>

ಗುವಾಹಟಿಯ ಬರ್ಸಪರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಇಂದು ಇಂಗ್ಲೆಂಡ್-ಬಾಂಗ್ಲಾದೇಶ ವನಿತಾ ತಂಡ ಮುಖಾಮುಖಿಯಾಗಿವೆ.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ ತಂಡ ಇಂಗ್ಲೆಂಡ್‌ಗೆ ಗೆಲ್ಲಲು ೧೭೯ ರನ್‌ಗಳ ಗುರಿ ನೀಡಿದ. ಈ ಗುರಿ ಬೆನ್ನತ್ತಿರುವ ಇಂಗ್ಲೆಂಡ್ ಇತ್ತೀಚಿನ ವರದಿ ಬಂದಾಗ ೧೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೬೪ ರನ್ ಮಾಡಿ ಆಡುತ್ತಿದೆ.

<><><><>

ಹಿಮಾಚಲ ಪ್ರದೇಶ, ಉತ್ತರಾಖಂಡ, ರಾಯಲಸೀಮಾ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ಭಾರತದ ಈಶಾನ್ಯ ರಾಜ್ಯಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿ, ಉತ್ತರಾಖಂಡ, ಚಂಡೀಗಢ, ಹಿಮಾಚಲ ಪ್ರದೇಶ, ಪಂಜಾಬ್ ಮತ್ತು ಹರಿಯಾಣಗಳಲ್ಲಿ, ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಆಂಧ್ರಪ್ರದೇಶದ ಕರಾವಳಿ, ಪಶ್ಚಿಮ ಬಂಗಾಳ, ಕರ್ನಾಟಕ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್, ಮುಜಫರಾಬಾದ್ ಮತ್ತು ರಾಜಸ್ಥಾನದ ಪಶ್ಚಿಮ ಭಾಗಗಳಲ್ಲಿಯೂ ಇದೇ ರೀತಿಯ ಪರಿಸ್ಥಿತಿ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>